ಓ ಅಲ್ಲಾಹನ ಸಂದೇಶವಾಹಕರೇ, ಒಬ್ಬ ವ್ಯಕ್ತಿ ಬಂದು ನನ್ನ ಸಂಪತ್ತನ್ನು ಕಸಿದುಕೊಳ್ಳಲು ಬಯಸಿದರೆ (ನಾನೇನು ಮಾಡಬೇಕು) ಎಂದು ತಿಳಿಸಿರಿ?

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಒಬ್ಬ ವ್ಯಕ್ತಿ ಅಲ್ಲಾಹನ ಸಂದೇಶವಾಹಕರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಬಳಿಗೆ ಬಂದು, ಹೇಳಿದರು: "ಓ ಅಲ್ಲಾಹನ ಸಂದೇಶವಾಹಕರೇ, ಒಬ್ಬ ವ್ಯಕ್ತಿ ಬಂದು ನನ್ನ ಸಂಪತ್ತನ್ನು ಕಸಿದುಕೊಳ್ಳಲು ಬಯಸಿದರೆ (ನಾನೇನು ಮಾಡಬೇಕು) ಎಂದು ತಿಳಿಸಿರಿ?" ಪ್ರವಾದಿಯವರು ಹೇಳಿದರು: "ನಿನ್ನ ಸಂಪತ್ತನ್ನು ಅವನಿಗೆ ಕೊಡಬೇಡ". ಅವರು (ವ್ಯಕ್ತಿ) ಕೇಳಿದರು: "ಅವನು ನನ್ನೊಂದಿಗೆ ಹೋರಾಡಿದರೆ (ನಾನೇನು ಮಾಡಬೇಕು) ಎಂದು ತಿಳಿಸಿರಿ?" ಪ್ರವಾದಿಯವರು ಹೇಳಿದರು: "ಅವನೊಂದಿಗೆ ಹೋರಾಡು". ಅವರು ಕೇಳಿದರು: "ಅವನು ನನ್ನನ್ನು ಕೊಂದರೆ (ನನ್ನ ಗತಿಯೇನು) ಎಂದು ತಿಳಿಸಿರಿ?" ಪ್ರವಾದಿಯವರು ಹೇಳಿದರು: "ಹಾಗಾದರೆ ನೀನು ಶಹೀದ್ (ಹುತಾತ್ಮ)". ಅವರು ಕೇಳಿದರು: "ನಾನು
ಅವನನ್ನು ಕೊಂದರೆ (ಅವನ ಗತಿಯೇನು) ಎಂದು ತಿಳಿಸಿರಿ?". ಪ್ರವಾದಿಯವರು ಹೇಳಿದರು: "ಅವನು ನರಕದಲ್ಲಿರುತ್ತಾನೆ".
[صحيح] [رواه مسلم]

ಒಬ್ಬ ವ್ಯಕ್ತಿ ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಬಳಿಗೆ ಬಂದು, ಹೇಳಿದರು: ಓ ಅಲ್ಲಾಹನ ಸಂದೇಶವಾಹಕರೇ, ಒಬ್ಬ ವ್ಯಕ್ತಿ ಬಂದು ನನ್ನ ಸಂಪತ್ತನ್ನು ಕಸಿದುಕೊಳ್ಳಲು ಬಯಸಿದರೆ (ನಾನೇನು ಮಾಡಬೇಕು) ಎಂದು ತಿಳಿಸಿರಿ? ಪ್ರವಾದಿಯವರು ಹೇಳಿದರು: ನೀನು ಅವನಿಗೆ ಶರಣಾಗಿ ನಿನ್ನ ಸಂಪತ್ತನ್ನು ಅವನಿಗೆ ನೀಡುವುದು ಕಡ್ಡಾಯವಲ್ಲ. ಅವರು (ವ್ಯಕ್ತಿ) ಕೇಳಿದರು: ಅವನು ನನ್ನೊಂದಿಗೆ ಹೋರಾಡಿದರೆ (ನಾನೇನು ಮಾಡಬೇಕು) ಎಂದು ತಿಳಿಸಿರಿ? ಪ್ರವಾದಿಯವರು ಹೇಳಿದರು: ಅವನೊಂದಿಗೆ ಹೋರಾಡಲು ನಿನಗೆ ಅನುಮತಿಯಿದೆ. ಅವರು (ವ್ಯಕ್ತಿ) ಕೇಳಿದರು: ಅವನು ನನ್ನನ್ನು ಕೊಂದರೆ (ನನ್ನ ಗತಿಯೇನು) ಎಂದು ತಿಳಿಸಿರಿ? ಪ್ರವಾದಿಯವರು ಹೇಳಿದರು: ಹಾಗಾದರೆ ನೀನು ಶಹೀದ್ (ಹುತಾತ್ಮ) ಆಗುವೆ. ಅವರು (ವ್ಯಕ್ತಿ) ಕೇಳಿದರು: ನಾನು ಅವನನ್ನು ಕೊಂದರೆ (ಅವನ ಗತಿಯೇನು) ಎಂದು ತಿಳಿಸಿರಿ? ಪ್ರವಾದಿಯವರು ಹೇಳಿದರು: ಅವನು ಪುನರುತ್ಥಾನ ದಿನದಂದು ನರಕದಲ್ಲಿ ಶಿಕ್ಷಿಸಲ್ಪಡಲು ಅರ್ಹನಾಗುತ್ತಾನೆ.

http://www.sunnah.global/hadeeth/kn/show/3557